# ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು, ಮೈಸೂರು ಜಿಲ್ಲೆ.

## ಸಿ.ಸಿ.ನಂ. 315/2015

| | | |
|---|---|---|
| ಸಾಕ್ಷಿದಾರರ ಹೆಸರು | : | ಡಾ. ಚಂದ್ರಕಾಂತ್ |
| ತಂದೆಯ ಹೆಸರು | : | ಎಂ ವೀರಣ್ಣ |
| ವಯಸ್ಸು | : | 53 ವರ್ಷ |
| ಉದ್ಯೋಗ | : | ವೈದ್ಯಾಧಿಕಾರಿಗಳು, ಜೆ.ಎಸ್.ಎಸ್ ಆಸ್ಪತ್ರೆ, ಮೈಸೂರು. |
| ವಾಸಸ್ಥಳ | : | ಮೈಸೂರು. |

**ಸಾಕ್ಷಿಯನ್ನು ದಿನಾಂಕಃ 25.01.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸ. ಸ. ಅ. ರವರಿಂದಃ**

ನಾನು 2011 ರಿಂದ 2015 ರವರೆಗೆ ಮೈಸೂರಿನ ಅಪೋಲೋ ಆಸ್ಪತ್ರೆಯಲ್ಲಿ ವೈದ್ಯಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 29.09.2014 ರಂದು ಮಂಚಯ್ಯ ಎಂಬುವವರು ಚಾಸಾ-1 ರವರನ್ನು ಹಲ್ಲೆಯ ಇತಿಹಾಸದೊಂದಿಗೆ ಅಪೋಲೋ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಿಸಿದ್ದು, ಅವರನ್ನು ಪರೀಕ್ಷೆ ಮಾಡಿ ನೋಡಲಾಗಿ ತಲೆಯಲ್ಲಿ ನೋವು ಮತ್ತು ಎಡಭುಜದಲ್ಲಿ ನೋವು (headache and pain in left shoulder) ಇರುವುದು ಕಂಡುಬಂದಿರುತ್ತದೆ. ಈ ಮೇಲ್ಕಂಡ ಗಾಯ ನನ್ನ ಅಭಿಪ್ರಾಯದಲ್ಲಿ ಸಾಮಾನ್ಯ ಸ್ವರೂಪದ ಗಾಯವಾಗಿರುತ್ತದೆ. ಈ ಬಗ್ಗೆ ನಾನು ಗಾಯದ ಪ್ರಮಾಣ ಪತ್ರವನ್ನು ನೀಡಿರುತ್ತೇನೆ. ಸಾಕ್ಷಿಯು ಗಾಯದ ಪ್ರಮಾಣ ಪತ್ರವನ್ನು ನೋಡಿ ಗುರುತಿಸಿದ್ದರಿಂದ, ಅದನ್ನು ನಿ.ಪಿ-8 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ-8(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಎಸ್.ಬಿ, ವಕೀಲರಿಂದಃ**

ಆಸ್ಪತ್ರೆಗೆ ಮಂಚಯ್ಯ ಮತ್ತು ಚಾಸಾ–1 ಮಾತ್ರ ಬಂದಿದ್ದರು. ನಿಪಿ–1ರಲ್ಲಿ ಎಷ್ಟು ಗಂಟೆಗೆ ಪರೀಕ್ಷೆ ಮಾಡಿರುತ್ತೇನೆಂದು ನಮೂದಿಸಿಲ್ಲ. ಹವಾಮಾನ ವೈಪರೀತ್ಯಾದಿಂದಾಗಿಯು ಕೂಡ ತಲೆನೋವು ಮತ್ತು ಮೈ ನೋವು ಬರುವ ಸಾಧ್ಯತೆಗಳಿರುತ್ತವೆ. ಪೊಲೀಸರ ಕೋರಿಕೆಯ ಮೇರೆಗೆ ಸುಳ್ಳು ಗಾಯದ ಪ್ರಮಾಣಪತ್ರ ನೀಡಿರುತ್ತೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

**ಓ ಹೇ ಕೇ ಸಾ ಸ ಇ ಒ.,**

ಸಹಿ/-

**ಪ್ರಧಾನ ಸಿವಿಲ್ ನಾಯಾಧೀಶರು ಮತ್ತು ಪ್ರ.ದ.ನ್ಯಾದಂ.,**

**ನಂಜನಗೂಡು.**